ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಇತರೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 1/7/2020

# ಅನ್‌ಲಾಕ್ ಹಂತ-2: ಮಾರ್ಗಸೂಚಿ

ಬೆಂಗಳೂರು: ಕೊರೊನಾ ಲಾಕ್‌ಡೌನ್ ಅನ್‌ಲಾಕ್ ಹಂತ-2 ಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯದ ಅಧಿಸೂಚನೆ ಆಧಾರದ ಮೇಲೆ ರಾಜ್ಯ ಸರ್ಕಾರವೂ ಮಾರ್ಗಸೂಚಿ ಬಿಡುಗಡೆಗೊಳಿಸಿದ್ದು, ಜುಲೈ 1 ರಿಂದ 31 ರವರೆಗೂ ಮುಂದುವರಿಯಲಿದೆ.

- ಜುಲೈ 31 ರವರೆಗೂ ಶಾಲಾ-ಕಾಲೇಜು, ತರಬೇತಿ ಸಂಸ್ಥೆಗಳು ತೆರೆಯುವುದಿಲ್ಲ, ಚಿತ್ರಮಂದಿರ, ಜಿಮ್, ಈಜುಕೊಳ, ಮೆಟ್ರೋ ಸೇವೆಯೂ ಇರುವುದಿಲ್ಲ. ಲಾಕ್‌ಡೌನ್ ಇಲ್ಲದ ಸಮಯದಲ್ಲಿ ವಿವಾಹ ಸಮಾರಂಭಕ್ಕೆ ಅವಕಾಶವಿದ್ದು 50 ಜನ ಪಾಲ್ಗೊಳ್ಳಲು ಮಾತ್ರ ಅನುಮತಿ. ಭಾನುವಾರದ ಲಾಕ್‌ಡೌನ್ ಸಂದರ್ಭದಲ್ಲಿ ಮೊದಲೇ ನಿಗದಿಯಾಗಿರುವ ವಿವಾಹಕ್ಕೆ ಮಾತ್ರ ಅನುಮತಿಯಿದೆ.
- ರಾಜಕೀಯ ಸಭೆ, ಸಮಾರಂಭ, ಧಾರ್ಮಿಕ ಜಾತ್ರೆಗಳಿಗೆ, ಮನೋರಂಜನೆ ಪಾರ್ಕ್‌ಗಳಿಗೆ ನಿರ್ಬಂಧ ಮುಂದುವರಿಯಲಿದ್ದು, ಕೇಂದ್ರ ಗೃಹ ಸಚಿವಾಲಯದ ಅನುಮತಿ ಹೊರತುಪಡಿಸಿದ ಅಂತಾರಾಷ್ಟ್ರೀಯ ವಿಮಾನ ಸೇವೆಯೂ ಇರುವುದಿಲ್ಲ. ಕೇಂದ್ರ ಗೃಹ ಸಚಿವಾಲಯದ ಸೂಚನೆ ಮೇರೆಗೆ ದೇಶೀಯ ವಿಮಾನ ಸೇವೆ ಹೆಚ್ಚಳಗೊಳ್ಳಲಿದೆ.
- ಬಾರ್ ಅಂಡ್ ರೆಸ್ಟೋರೆಂಟ್‌ಗಳಲ್ಲಿ ಪಾರ್ಸೆಲ್ ಸೇವೆ ಮಾತ್ರ ಮುಂದುವರಿಯಲಿದ್ದು ಜು.31 ರವರೆಗೂ ಇದು ಮುಂದುವರಿಯಲಿದೆ. ಪ್ರತಿ ಭಾನುವಾರ ಲಾಕ್‌ಡೌನ್ ಪೂರ್ಣ ಪ್ರಮಾಣದಲ್ಲಿ ಮುಂದುವರಿಕೆ ಜುಲೈ 5 ರಿಂದ ಆ.2 ರವರೆಗೆ ಐದು ಭಾನುವಾರ ಮುಂದುವರಿಯಲಿದೆ. ರಾತ್ರಿ ಕರ್ಫ್ಯೂ 8 ಗಂಟೆಯಿಂದ ಮುಂಜಾನೆ 5 ಗಂಟೆವರೆಗೂ ಇರಲಿದೆ.
- ಕಂಟೈನ್ಮೆಂಟ್ ವಲಯಗಳಲ್ಲಿ ಲಾಕ್‌ಡೌನ್ ನಿಯಮಾವಳಿಗಳು ಜಾರಿಯಲ್ಲಿರಲಿದ್ದು ಯಥಾಸ್ಥಿತಿ ಮುಂದುವರಿಯಲಿದೆ. ಸರ್ಕಾರಿ ಕಚೇರಿಗಳು, ನಿಗಮ ಮಂಡಳಿಗಳು ಜು.10 ರಿಂದ ಆಗಸ್ಟ್ 2ನೇ ವಾರದವರೆಗೆ ಪ್ರತಿ ಶನಿವಾರ ಮತ್ತು ಭಾನುವಾರ ರಜೆ ಇರಲಿದೆ.

ಉವಾ 1/7/20

## ಮಾಸ್ಕ್ ಧರಿಸದಿದ್ದರೆ 200 ರೂ. ದಂಡ

ಸಾರ್ವಜನಿಕ ಸ್ಥಳ, ಸಂಚಾರ ಸಮಯದಲ್ಲಿ ಮಾಸ್ಕ್ ಧರಿಸುವುದು ಕಡ್ಡಾಯವಾಗಿದ್ದು ಬೆಂಗಳೂರು ಸೇರಿ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಮಾಸ್ಕ್ ಧರಿಸದಿದ್ದರೆ 200 ರೂ. ದಂಡ, ರಾಜ್ಯದ ಇತರೆಡೆ ದಂಡದ ಮೊತ್ತ 100 ರೂ. ನಿಗದಿಪಡಿಸಲಾಗಿದೆ.